# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜಗಳೂರು

**ಸಿ ಸಿ ನಂಃ1405/2023**

**ಚಾಸಾ-5/ಪ್ರಾಸ-3**

**ಪ್ರಮಾಣ ವಚನ ಭೋಧಿಸಲಾಯಿತು.** ದಿನಾಂಕಃ**10.09.2024.**

| | | |
|---|---|---|
| ಹೆಸರು | : | ಗುರುಮೂರ್ತಿ ತಂದೆ ಬಸವರಾಜಪ್ಪ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ವ್ಯವಸಾಯ |
| ವಿಳಾಸ | : | ಸಾಗಲಗಟ್ಟೆ ಗ್ರಾಮ, ಜಗಳೂರು ತಾಲೂಕು |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ಈಗ ನೋಡುತ್ತಿರುವ ಅಮಾನತು ಪಂಚನಾಮೆಯ ಮೇಲೆ ಇರುವ ಸಹಿ ನನ್ನ ಸಹಿ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಅಮಾನತು ಪಂಚನಾಮೆಯನ್ನು ಈಗಾಗಲೇ **ನಿ.ಪಿ.2 ಎಂದು ಗುರುತಿಸಿದ್ದು**, ಸಾಕ್ಷಿಯ ಸಹಿಯನ್ನು **ನಿ.ಪಿ.2(ಬಿ)** ಎಂದು ಗುರುತಿಸಲಾಯಿತು. ನಿ.ಪಿ.2 ರಲ್ಲಿ ಏನು ಬರೆಯಲಾಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಈಗ ನೋಡುತ್ತಿರುವ ಎರಡು ಫೋಟೋನಲ್ಲಿರುವ ವ್ಯಕ್ತಿ ನಾನೇ ಇರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಫೋಟೋಗಳನ್ನು ಈಗಾಗಲೇ **ನಿ.ಪಿ.3 ಮತ್ತು 4** ಎಂದು ಗುರುತಿಸಲಾಗಿರುತ್ತದೆ. ಸದರಿ ಫೋಟೋ ಎಲ್ಲಿ ಮತ್ತು ಯಾವ ಕಾರಣಕ್ಕಾಗಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಅಮಾನತು ಪಂಚನಾಮೆ ಮಾಡಿರುವುದಿಲ್ಲ. ನನಗೆ ಆರೋಪಿ ಗೊತ್ತಿರುವುದಿಲ್ಲ.

( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದ:-

ದಿಃ28.06.2023 ರಂದು ಮದ್ಯಾಹ್ನ 12ಃ00 ರಿಂದ 01ಃ00 ಗಂಟೆಯವರೆಗೆ ಚಾಸಾ13 ರವರು ಹಾಜರುಪಡಿಸಿದ ಕೆ.ಎ.16/ಇಎಸ್-2459 ವಾಹನವನ್ನು ನನ್ನ ಮತ್ತು ಚಾಸಾ4 ರವರ ಸಮಕ್ಷಮ ಚಾಸಾ20 ರವರು ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಬಗ್ಗೆ ನಿ.ಪಿ.2

ಅಮಾನತು ಪಂಚನಾಮೆಯನ್ನು ಬರೆದು ನಮಗೆ ಓದಿ ಹೇಳಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ನಿ.ಪಿ.3 ಮತ್ತು 4 ಫೋಟೋಗಳನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿ.ಪಿ.2 ಪಂಚನಾಮೆಯನ್ನು ಮಾಡಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ-ಆರೋಪಿ ಪರ ವಕೀಲರಿಂದಃ ಇಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿರುತ್ತಾರೆ.)

ಓ ಹೇ ಕೇ ಸರಿ ಇದೆ

ಸಹಿ

**ಪ್ರ.ದ.ನ್ಯಾ.ದಂ., ಜಗಳೂರು**

# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಜಗಳೂರು

**ಸಿ ಸಿ ನಂಃ58/2019**

**ಚಾಸಾ-3/ಪ್ರಾಸ-3**

**ಪ್ರಮಾಣ ವಚನ ಭೋಧಿಸಲಾಯಿತು.** ದಿನಾಂಕಃ**14.09.2022.**

| | | |
|---|---|---|
| ಹೆಸರು | : | ಮಾರುತಿ ತಂದೆ ನಾಗಪ್ಪ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ವ್ಯವಸಾಯ |
| ವಿಳಾಸ | : | ಶೆಟ್ಟಿಗೊಂಡನಹಳ್ಳಿ ಗ್ರಾಮ, ಮುಂಡರಗಿ ತಾಲೂಕು |

**ಮುಖ್ಯ ವಿಚಾರಣೆ : ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ನನಗೆ ಚಾಸಾ-2 ಇವರ ಪರಿಚಯ ಇರುತ್ತದೆ. ಈಗ ನೋಡುತ್ತಿರುವ ಅಪಘಾತ ಸ್ಥಳ ಪಂಚನಾಮೆಯ ಮೇಲೆ ಇರುವ ಸಹಿ ನನ್ನ ಸಹಿ ಇರುತ್ತದೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಅಪಘಾತ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿ.ಪಿ.3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ.3(ಬಿ) ಎಂದು ಗುರುತಿಸಲಾಯಿತು. ನಿ.ಪಿ.3 ರಲ್ಲಿ ಏನು ಬರೆಯಲಾಗಿರುತ್ತದೆ ಎಂದು ನನಗೆ ಗೊತ್ತಿರುವುದಿಲ್ಲ. ಈಗ ನೋಡುತ್ತಿರುವ ಎರಡು ಪೋಟೋನಲ್ಲಿರುವ ವ್ಯಕ್ತಿ ನಾನೇ ಇರುತ್ತೇನೆ. ಸಾಕ್ಷಿ ನೋಡಿ ಗುರುತಿಸಿದ ಸದರಿ ಪೋಟೋಗಳನ್ನು ನಿ.ಪಿ.4 ಮತ್ತು 5 ಎಂದು ಗುರುತಿಸಲಾಯಿತು. ಸದರಿ ಪೋಟೋ ಎಲ್ಲಿ ಮತ್ತು ಯಾವ ಕಾರಣಕ್ಕಾಗಿ ಪಡೆದಿರುತ್ತಾರೆ ಎಂದು ನನಗೆ ಗೊತ್ತಿರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ.

( ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದ:-

ದಿಃ20.09.2018 ರಂದು ಮದ್ಯಾಹ್ನ 3ಃ00 ಗಂಟೆಗೆ ಈ ಪ್ರಕರಣದ ಅಪಘಾತ ಸ್ಥಳವಾದ ಶೆಟ್ಟಿಗೊಂಡನಹಳ್ಳಿ ಗ್ರಾಮದ ಹೊರ ವಲಯದಲ್ಲಿ ಇರುವ ಹೆಚ್ ಬಸವರಾಜಪ್ಪ ತಂದೆ ಹನುಮಂತಪ್ಪ ಇವರ ಜಮೀನು ಪಕ್ಕದಲ್ಲಿ ಹಾದುಹೋಗಿರುವ ಶೆಟ್ಟಿಗೊಂಡನಹಳ್ಳಿ - ಬಸವಪುರ ರಸ್ತೆಯಲ್ಲಿ ಚಾಸಾ-20

ಇವರು ನನಗೆ ಮತ್ತು ಚಾಸಾ-2 ಇವರಿಗೆ ಸ್ಥಳ  ಪಂಚನಾಮೆ ಕುರಿತು ಕರೆಯಿಸಿದ್ದರು ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಚಾಸಾ-12 ಇವರು ಹಾಜರಿದ್ದು, ಅವರು ತೋರಿಸಿದ ಅಪಘಾತ ಸ್ಥಳದಲ್ಲಿ ಚಾಸಾ-20 ಇವರು ನಮ್ಮ ಸಮಕ್ಷಮ ಸ್ಥಳ  ಪಂಚನಾಮೆಯನ್ನು ಮಾಡಿರುತ್ತಾರೆ ಮತ್ತು ಆ ಬಗ್ಗೆ ನಿ.ಪಿ.3 ಪಂಚನಾಮೆಯನ್ನು ಬರೆದು ನಮಗೆ ಓದಿ ಹೇಳಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.  ಸದರಿ ಸ್ಥಳದಲ್ಲಿ ನಿ.ಪಿ.4 ಮತ್ತು 5 ಪೋಟೋಗಳನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ನಿ.ಪಿ.3 ಪಂಚನಾಮೆಯನ್ನು ಮಾಡಿದ್ದರು ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ-ಆರೋಪಿ ಪರ ವಕೀಲರಿಂದಃ ಇಲ್ಲ ಎಂದು ಹೇಳಿರುತ್ತಾರೆ.**

**ಮರು ವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿರುತ್ತಾರೆ.)

ಓ ಹೇ  ಕೇ ಸರಿ ಇದೆ

**ಪ್ರ.ದ.ನ್ಯಾ.ದಂ., ಜಗಳೂರು**